2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ನ್ಯಾಯಾಲಯದಲ್ಲಿ,
ಚಿಕ್ಕಮಗಳೂರು

<u>ಸತ್ರ ಮೊಕದ್ದಮೆ ನಂಃ 140/2019</u>

| | | | |
|---|---|---|---|
| ಸಾಕ್ಷಿದಾರರ ಹೆಸರು | - | ಮಹೇಂದ್ರ | ಪಿಡಬ್ಲೂ -04 |
| ತಂದೆಯ ಹೆಸರು | - | ಅಣ್ಣಪ್ಪ | ಸಿಡಬ್ಲೂ -04 |
| ವಯಸ್ಸು | - | 29 ವರ್ಷ | |
| ಉದ್ಯೋಗ | - | ಕೂಲಿ | |
| ವಾಸ ಸ್ಥಳ | - | ರಾಜೀವ್ ಗಾಂಧಿ ಬಡಾವಣೆ, ಚಿಕ್ಕಮಗಳೂರು | |

ದಿನಾಂಕಃ 11.09.2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆ : ವಿಶೇಷ ಸರ್ಕಾರಿ ಅಭಿಯೋಜಕರಿಂದ-</u>

1. ಆರೋಪಿ ಹಾಗೂ ಚಾಸಾ.1 ಗೊತ್ತು. ಚಾಸಾ.5 ಗೊತ್ತು.
2. ಈಗ ನೋಡುತ್ತಿರುವ ನಿಪಿ.2 ಮಹಜರಿನಲ್ಲಿ ನನ್ನ ಸಹಿ ಇದ್ದು ಸಾಕ್ಷಿಯ ಸಹಿಯನ್ನು ನಿಪಿ.2(ಸಿ) ಎಂದು ಗುರುತಿಸಲಾಯಿತು.
3. ನಿಪಿ.2 ಮಹಜರುಗೆ ಸುಮಾರು 8 ವರ್ಷಗಳ ಹಿಂದೆ ಒಂದು ದಿನ ಸಖರಾಯಪಟ್ಟಣ ಪೋಲೀಸ್ ಠಾಣೆಯಲ್ಲಿ ಸಹಿ ಮಾಡಿದ್ದೇನೆ. ನಿಪಿ.2 ರಲ್ಲಿ ಬರೆದ ವಿಚಾರ ಗೊತ್ತಿಲ್ಲ. ನನ್ನೊಂದಿಗೆ ಚಾಸಾ.5 ರವರು ಕೂಡ ನಿಪಿ.2 ಕ್ಕೆ ಸಹಿ ಮಾಡಿದ್ದಾರೆ. ನನಗೆ ಈ ಪ್ರಕರಣದಲ್ಲಿ ಯಾವುದೇ ಮಾಹಿತಿ ಇಲ್ಲ.
4. ಈಗ ತೋರಿಸಿದ ನಿಪಿ.3 ಛಾಯಚಿತ್ರವನ್ನು ಪೋಲೀಸರು ಸಂಗ್ರಹಿಸಿದ್ದರು, ಅದು ಯಾರ ಮನೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅಭಿಯೋಜಕರು ಅನುಮತಿ ಕೇಳಿರುತ್ತಾರೆ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ ವಿಶೇಷ ಸರ್ಕಾರಿ ಅಭಿಯೋಜಕರಿಂದಃ-</u>

5. ದಿಃ 02.06.2016 ರಂದು ಚಾಸಾ.3 ರವರು ತೋರಿಸಿದ ಸ್ಥಳದಲ್ಲಿ ಪೋಲೀಸರು ನಿಪಿ.2 ರಂತೆ ಮಹಜರು ಮಾಡಿ ಸ್ಥಳದಲ್ಲಿ ಈಗ ತೋರಿಸಿದ ನಿಪಿ.3 ರ ಛಾಯಚಿತ್ರವನ್ನು ಸಂಗ್ರಹಿಸಿದರು ಎಂದರೆ ಸರಿಯಲ್ಲ.

6. ನನಗೆ ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಇಲ್ಲ

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯ್ತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-

2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ